ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ರಾಜ್ಯದಲ್ಲಿರುವ ಹೊಸ ತಾಲ್ಲೂಕುಗಳ ಮಾಹಿತಿ ಕುರಿತು

ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-

225 (281) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸ ತಾಲ್ಲೂಕುಗಳು ರಚನೆಯಾಗಿ ಅಧಿಕೃತವಾಗಿ ಉದ್ಘಾಟನೆಗೊಂಡು ತಾಲ್ಲೂಕು ಕಛೇರಿಗಳು ಪ್ರಾರಂಭವಾಗಿವೆಯೇ; ಮತ್ತು ತಾಲ್ಲೂಕು ಪಂಚಾಯಿತಿ ಪುನರ್ ನಿರ್ಮಾಣವಾಗಿದೆಯೇ; (ವಿವರ ನೀಡುವುದು)

(ಆ) ಹೊಸ ತಾಲ್ಲೂಕಿಗೆ ಇರಬೇಕಾದ ಎಲ್ಲಾ ಇಲಾಖೆಗಳ ಕಛೇರಿಗಳು ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯಾರಂಭ ಮಾಡಿದಿಯೇ; ಹಾಗೂ ಈ ತಾಲ್ಲೂಕು ಕಛೇರಿಗಳು ಕಾರ್ಯಾರಂಭವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಹೊಸ ತಾಲ್ಲೂಕಿಗೆ ಮೂಲಸೌಕರ್ಯಗಳನ್ನು ಯಾವಾಗ ಒದಗಿಸಲಾಗುವುದು;

(ಈ) ರಾಜ್ಯದಲ್ಲಿರುವ ಹೊಸ ತಾಲ್ಲೂಕುಗಳಿಗೆ ಇಲ್ಲಿಯವರೆಗೆ ಒದಗಿಸಿರುವ ಅನುದಾನ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)